ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1468
ಸದಸ್ಯರ ಹೆಸರು : ಡಾ॥ ಚಂದ್ರಶೇಖರ್ ಬಿ. ಪಾಟೀಲ್
ಉತ್ತರಿಸಬೇಕಾದ ದಿನಾಂಕ : 10-03-2022
ಉತ್ತರಿಸುವ ಸಚಿವರು : ಗೃಹ ಸಚಿವರು

<table>
<tr><th>ಕ್ರಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಲ್ಯಾಣ ಕರ್ನಾಟಕ ಭಾಗದಲ್ಲಿ ಹೆಚ್ಚು ಅಕ್ರಮ ಮರಳು ಸಾಗಣೆ ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?</td><td>ಬಂದಿದೆ.</td></tr>
<tr><td>ಆ</td><td>ಬಂದಿದ್ದಲ್ಲಿ, ಅಕ್ರಮ ಮರಳು ಸಾಗಾಣಿ ದಂಧೆಕೋರರ ವಿರುದ್ಧ ಎಷ್ಟು ಪ್ರಕರಣಗಳು ದಾಖಲಾಗಿವೆ? (ವಿವರ ನೀಡುವುದು)</td><td>ಕಲ್ಯಾಣ ಕರ್ನಾಟಕ ಭಾಗದಲ್ಲಿ ಅಕ್ರಮ ಮರಳು ಸಾಗಾಣಿಕೆ ದಂಧೆಕೋರರ ವಿರುದ್ಧ ದಾಖಲಾದ ಪ್ರಕರಣಗಳ ವಿವರ ಕೆಳಗಿನಂತಿದೆ.

<table>
<tr><th rowspan="2">ಕ್ರಸ</th><th rowspan="2">ಘಟಕ</th><th colspan="4">ವರ್ಷ</th></tr>
<tr><th>2019</th><th>2020</th><th>2021</th><th>2022</th></tr>
<tr><td>1</td><td>ಕಲಬುರಗಿ ನಗರ</td><td>20</td><td>9</td><td>6</td><td>0</td></tr>
<tr><td>2</td><td>ಕಲಬುರಗಿ ಜಿಲ್ಲೆ</td><td>252</td><td>182</td><td>215</td><td>33</td></tr>
<tr><td>3</td><td>ರಾಯಚೂರು</td><td>234</td><td>140</td><td>172</td><td>32</td></tr>
<tr><td>4</td><td>ಯಾದಗಿರಿ</td><td>157</td><td>116</td><td>85</td><td>14</td></tr>
<tr><td>5</td><td>ಬೀದರ್</td><td>1</td><td>1</td><td>0</td><td>0</td></tr>
<tr><td>6</td><td>ಕೊಪ್ಪಳ</td><td>225</td><td>115</td><td>45</td><td>0</td></tr>
<tr><td>7</td><td>ಬಳ್ಳಾರಿ</td><td>207</td><td>75</td><td>39</td><td>10</td></tr>
<tr><td>8</td><td>ವಿಜಯನಗರ</td><td>181</td><td>130</td><td>122</td><td>41</td></tr>
<tr><td></td><td>ಒಟ್ಟು</td><td>1277</td><td>768</td><td>684</td><td>130</td></tr>
</table></td></tr>
<tr><td>ಇ</td><td>ಅಕ್ರಮ ಮರಳು ಸಾಗಣೆ ದಂಧೆ ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?</td><td>ಅಕ್ರಮ ಮರಳು ಸಾಗಣೆ ದಂಧೆ ತಡೆಯಲು ಕೈಗೊಂಡ ಕ್ರಮ:
1. ಅಕ್ರಮ ಮರಳು ಸಾಗಾಣಿಕೆಯಾಗದಂತೆ ಚೆಕ್ ಪೋಸ್ಟ್‌ಗಳನ್ನು ನಿರ್ಮಿಸಿ ವಾಹನಗಳನ್ನು ತಪಾಸಣೆ ಮಾಡಿ ಯಾವುದೇ ರೀತಿಯಲ್ಲಿ ಅಕ್ರಮವಾಗಿ ಮರಳು ಗಣಿಗಾರಿಕೆ ಚಟುವಟಿಕೆಗಳು ನಡೆಯದಂತೆ ನಿಗಾ ವಹಿಸಲಾಗಿದೆ. ರಾತ್ರಿ ಗಸ್ತು ಮತ್ತು ಹಗಲು ಗಸ್ತು ಸಬ್ ಬೀಟ್ ಕರ್ತವ್ಯಕ್ಕೆ ಸಿಬ್ಬಂದಿಗಳನ್ನು ನಿಯೋಜನೆ ಮಾಡಲಾಗುತ್ತಿದೆ.
2. ಈ ಸಮಯದಲ್ಲಿ ಅಕ್ರಮ ಮರಳು ಸಾಗಾಣಿಕೆ ಕಂಡು ಬಂದಲ್ಲಿ ಅಂಥಹವರ ವಿರುದ್ಧ ಕಾನೂನು ಕ್ರಮ ಕೈಗೊಂಡು ಆರೋಪಿತರನ್ನು ನ್ಯಾಯಾಂಗ ಬಂಧನಕ್ಕೆ ಒಳಪಡಿಸಲಾಗುತ್ತಿದೆ.</td></tr>
</table>

		3. ಮಹಾರಾಷ್ಟ್ರ ರಾಜ್ಯಕ್ಕೆ ಹೊಂದಿಕೊಂಡಿರುವ ಹಳ್ಳಿಗಳಲ್ಲಿ ಸಭೆಗಳನ್ನು ಮಾಡಿ ಸಾರ್ವಜನಿಕರಿಗೆ ಈ ಕುರಿತು ತಿಳುವಳಿಕೆ ನೀಡಿ ಅಹಿತಕರ ಘಟನೆಗಳು ನಡೆಯದಂತೆ ನಿಗಾವಹಿಸಲಾಗಿದೆ. 4. ಅರಣ್ಯ, ಕಂದಾಯ, ಲೋಕೋಪಯೋಗಿ, ಗಣಿ & ಭೂ ವಿಜ್ಞಾನ ಇಲಾಖೆಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಇತರೆ ಇಲಾಖೆಗಳಿಗೆ ಅಗತ್ಯ ಸಹಕಾರವನ್ನು ಒದಗಿಸಿ ಯಾವುದೇ ರೀತಿಯ ಅಕ್ರಮ ಮರಳು ಗಣಿಗಾರಿಕೆ ಮತ್ತು ಸಾಗಾಣಿಕೆ ನಡೆಯದಂತೆ ಕ್ರಮಕೈಗೊಳ್ಳಲಾಗುತ್ತಿದೆ. ಈ ವಿಷಯದಲ್ಲಿ ನಿರ್ಲಕ್ಷತನ ತೋರುವ ಅಧಿಕಾರಿ/ ಸಿಬ್ಬಂದಿಯವರ ವಿರುದ್ಧ ಕಟ್ಟುನಿಟ್ಟಿನ ಕ್ರಮಕೈಗೊಳ್ಳಲಾಗುತ್ತಿದೆ. 5. ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪತ್ರ ಪಡೆದು ಮರಳು ಸಾಗಿಸುವ ವಾಹನಗಳನ್ನು ನಿಯಮಿತವಾಗಿ' ತಪಾಸಣೆ ಮಾಡಿ ನಕಲಿ ಪರ್ಮಿಟ್ಟುಗಳನ್ನು ಪಡೆದು ಮರಳನ್ನು ಸಾಗಿಸುವ ವಾಹನಗಳ ಮೇಲೆ ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ.

ಸಂಖ್ಯೆ:ಹೆಚ್‌ಡಿ 104 ಎಸ್‌ಎಸ್‌ಟಿ 2022

(ಆರಗ ಜ್ಞಾನೇಂದ್ರ)
ಗೃಹ ಸಚಿವರು